# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 31.07.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ಎಂ ಎಲ್ ರವಿಕುಮಾರ್ | ಎಂ ಓ ಹೆಚ್ |
| 4 | ಡಾ.ಅಂಬರೀಶ್ | ಕೋವಿಡ್ ಅಧಿಕಾರಿ |
| 5 | ಸುರೇಶ್ ಕೆ ವಿ | ಸೆಕ್ಟರ್ ಆಫೀಸರ್ |
| 6 | ಅನುಪಮ ಎನ್ | ಕಂದಾಯ ವಸೂಲಿಗಾರರು- ವಾರ್ಡ್ 71 |
| 7 | ಡಾ.ಸುಶ್ಮಿತಾ | ಕೋವಿಡ್ ಮೆಡಿಕಲ್ ಆಫೀಸರ್, ಟ್ರಯಾಜ್ ಸೆಂಟರ್ |
| 8 | ಕಮಲಪ್ಪ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 9 | ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 10 | ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು- ವಾರ್ಡ್ 71 |
| 11 | ಎನ್ ಮುರುಳಿ | ಕಂದಾಯ ವಸೂಲಿಗಾರರು- ವಾರ್ಡ್ 71 |
| 12 | ಎಂ ಲಿಂಗಯ್ಯ | ಕಂದಾಯ ನಿರೀಕ್ಷಕರು- ವಾರ್ಡ್ 71 |

**:ನಡಾವಳಿಯ ವರದಿ:**

- ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **<u>ಕೋವಿಡ್-19, ಸಾಂಕ್ರಾಮಿಕ ರೋಗದ ಬಗ್ಗೆ</u>**
  - ಸಭೆಯಲ್ಲಿ ರಾಮಣ್ಣ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ರವರು 20/07/2021 ರಿಂದ 30/07/2021ರವರೆಗಿನ ಲಸಿಕಾಕರಣ ಹಾಗೂ ಕೋವಿಡ್ ತಪಾಸಣೆಗಾಗಿ ಸಂಬಂಧಿಸಿದ ವಿವರಗಳನ್ನು ಸಭೆಯಲ್ಲಿ ತಿಳಿಸಲಾಯಿತು.

- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿರವರು ಮಾತನಾಡಿ ಕೋವಿಡ್ ಸೋಂಕು ವಾರ್ಡ್ ಬೆರಳಣಿಕೆಯಲ್ಲಿ ಸೋಂಕು ಪತ್ತೆಯಾಗುತ್ತಿದ್ದು, ಇಳಿಕೆ ಕಾಣುತ್ತಿದ್ದರೂ ಸಹ ಮಾಸ್ಕ್ ಧರಿಸುವ ಹಾಗೂ ಅಂತರ ಕಾಯ್ದುಕೊಳ್ಳುವ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಿದರು ಸಾರ್ವಜನಿಕರಲ್ಲಿ ಲಸಿಕೆ ಹಾಕಿಸಿಕೊಳ್ಳುವ ಬಗ್ಗೆ ಹೆಚ್ಚಿನ ಪ್ರಚಾರ ಕೈಗೊಂಡು ಅರಿವು ಮೂಡಿ ಸೂಚಿಸಿದರು.

- <u>ಒಳಚರಂಡಿ ಮತ್ತು ನೀರು ಸಂಪರ್ಕಗಳಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ</u>

    - ಸುರೇಶ್ ಕೆ ವಿಮಾತನಾಡುತ್ತಾ, ಸುಂಕದಕಟ್ಟೆ, ಪೈಪ್‌ಲೇನ್ ರಸ್ತೆಯಲ್ಲಿ ಒಳಚರಂಡಿ ದುರಸ್ತಿಪಡಿಸಿದ್ದು ರಸ್ತೆಯನ್ನು Restoration ಮಾಡಿರುವುದಿಲ್ಲ ಈ ಬಗ್ಗೆ ಕ್ರಮವಹಿಸಲು ಕೋರಿದರು.

        - ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರೊಂದಿಗೆ ಮಾತನಾಡಿದ್ದು, ಶೀಘ್ರದಲ್ಲಿಯೇ ವೆಟ್ ಮಿಕ್ಸ್ ಅಳವಡಿಸಿ Restoration ಮಾಡಿಸಲಾಗುವುದು ಎಂದು ತಿಳಿಸಿರುವುದಾಗೀ ಸಭೆಗೆ ತಿಳಿಸಿದರು

    - ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿರವರು ಮಾತನಾಡಿ ಮಳೆ ಜಾಸ್ತಿ ಆಗಿರುವುದರಿಂದ್ಲ ಮರಗಳು ಬೀಳುವ ಸಂಭವವಿದ್ದು, ಚಾಚಿರುವ ರೆಂಬೆ ಕೊಂಬೆಗಳನ್ನು ಮುಂಜಾಗ್ರತ ಕ್ರಮವಾಗಿ ತೆರವುಗೊಳಿಸಲು ಅರಣ್ಯ ಇಲಾಖೆ ರವರ ಗಮನಕ್ಕೆ ತಂದು ಕ್ರಮ ವಹಿಸಲು ಕಾರ್ಯದರ್ಶೀ ರವರಿಗೆ ಸೂಚಿಸಿದರು.

- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿ-ವಾರ್ಡ್ ನಂ.71, ರವರು ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ಬಗ್ಗೆ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಪರೀಕ್ಷೆ ನಡೆಸಲು ಸೂಚಿಸಿದರು ಹಾಗೂ ಮಾಸ್ಕ್ ಧರಿಸುವ ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಹಾಗೂ ಲಸಿಕೆ ಹಾಕಿಸಿಕೊಳ್ಳುವ ಬಗ್ಗೆ ಧ್ವನಿವರ್ಧಕಗಳಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸೂಚಿಸಿದರು.

    - ಇದಕ್ಕೆ ಪ್ರತಿಕ್ರಿಯಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ರಾಮಣ್ಣ ರವರು ಮಾತನಾಡಿ, ವಾರದಲ್ಲಿ 4-5 ವ್ಯಕ್ತಿಗಳಲ್ಲಿ ಪಾಸಿಟಿವ್ ಪ್ರಕರಣಗಳು ಕಂಡುಬರುತ್ತಿದ್ದು, ಪಾಸಿಟಿವ್ ಪ್ರಕರಣಗಳಲ್ಲಿ ಗಣನೀಯವಾದ ಇಳಿಕೆ ಕಂಡುಬಂದಿರುತ್ತದೆ. ಇಳಿಕೆಯಾಗುತ್ತಿದೆ ಎಂದು ಉದಾಸೀನ ಮಾಡದೇ ವಾರ್ಡಿನ ಮುಖ್ಯಪ್ರದೇಶಗಳಲ್ಲಿ ಮಾರ್ಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತಿದೆ. ಮಾಸ್ಕ್ ಧರಿಸಲು ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಸಾರ್ವಜನಿಕರಲ್ಲಿ ಮನವೊಲಿಸುವ ಕಾರ್ಯವನ್ನು ಸಹ ಮಾಡಲಾಗುತ್ತಿದೆ ಎಂದು ತಿಳಿಸಿದರು.

<u>BBMP SAHAYA APP:</u>

- ಡಿ.ಎಸ್.ಮಂಜುನಾಥ್ ಸಹಾಯಕ ಅಭಿಯಂತ್ಯರರು, ವಾರ್ಡ್ ನಂ.71 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

- ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು

ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಹಾಗೂ ಕೋವಿಡ್ ಸಾಂಕ್ರಾಮಿಕವನ್ನು ತಡೆಗಟ್ಟಲು ಕೈ ಜೋಡಿಸಬೇಕೆಂದು ಮನವಿ ಮಾಡಿದರು.

ಸದಸ್ಯ ಕಾರ್ಯದರ್ಶಿ-ವಾರ್ಡ್ 71 ಹಾಗೂ
ಸಹಾಯಕ ಅಭಿಯಂತರರು,

(ಬಿ.ಆರ್ ರವಿಕುಮಾರ್)
ನೋಡಲ್ ಅಧಿಕಾರಿ ವಾರ್ಡ್-71

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ